# Bangalore
# Regional News
# 23.04.2025 / 6.40 p.m.

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

**1.** ಜಮ್ಮು-ಕಾಶ್ಮೀರ ಪ್ರವಾಸ ಕೈಗೊಂಡಿರುವ ಕನ್ನಡಿಗರನ್ನು ಸುರಕ್ಷಿತವಾಗಿ ಕರೆ ತರಲು ಸರ್ಕಾರದ ವ್ಯವಸ್ಥೆ

**2.** ಪಹಲ್ಗಾಮ್‌ನಲ್ಲಿ ಭಯೋತ್ಪಾದಕರ ದಾಳಿಗೆ ಖಂಡನೆ; ಮೇಣದ ಬತ್ತಿ ಹಚ್ಚಿ ಇಂದು ಬಿಜೆಪಿ ಪ್ರತಿಭಟನೆ

**3.** ನಾಳೆ ಮಲೆಮಹದೇಶ್ವರ ಬೆಟ್ಟದಲ್ಲಿ ವಿಶೇಷ ಸಚಿವ ಸಂಪುಟ ಸಭೆ; ಜಾತಿ ಗಣತಿ ವರದಿ ಕುರಿತಂತೆ ಚರ್ಚೆ

**4.** ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಸ್ವಚ್ಛತಾ ಅಭಿಯಾನ; ೩ ಸಾವಿರದ ೫೭೦ ಟನ್ ಕಟ್ಟಡ ತ್ಯಾಜ್ಯ ತೆರವು

<><><>

ಜಮ್ಮು-ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕರ ದಾಳಿಯಲ್ಲಿ ರಾಜ್ಯದ ಇಬ್ಬರು ಪ್ರವಾಸಿಗರು ಮೃತಪಟ್ಟಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಶಿವಮೊಗ್ಗದ ಮಂಜುನಾಥ್ ಹಾಗೂ ಬೆಂಗಳೂರಿನ ಭರತ್ ಭೂಷಣ್ ಮೃತಪಟ್ಟವರು ಎಂದು ಹೇಳಿದ್ದಾರೆ.

ಪಹಲ್ಗಾಮ್ ಭಯೋತ್ಪಾದಕರ ದಾಳಿ ಪೂರ್ವಯೋಜಿತ ಸಂಚಾಗಿದ್ದು, ಈ ಘಟನೆ ಅತ್ಯಂತ ಖಂಡನೀಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಕನ್ನಡಿಗರನ್ನು ಸುರಕ್ಷಿತವಾಗಿ ಕರೆತರಲು ಸರ್ಕಾರದಿಂದ ಸಕಲ ವ್ಯವಸ್ಥೆ ಮಾಡಲಾಗಿದ್ದು, ಸಚಿವ ಸಂತೋಷ್ ಲಾಡ್ ಅವರು ಈಗಾಗಲೇ ಕನ್ನಡಿಗರ ರಕ್ಷಣೆಯಲ್ಲಿ ನಿರತರಾಗಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

ಧ್ವನಿ : ಸಿದ್ದರಾಮಯ್ಯ

ಇದಕ್ಕೂ ಮೊದಲು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಮಂಜುನಾಥ್ ರಾವ್ ಅವರ ಪತ್ನಿ ಪಲ್ಲವಿ ಹಾಗೂ ಬೆಂಗಳೂರಿನ ಮತ್ತಿಕೆರೆಯ ಭರತ್ ಭೂಷಣ್ ಅವರ ಪತ್ನಿ ಸುಜಾತ ಅವರೊಂದಿಗೆ ದೂರವಾಣಿ ಮೂಲಕ ಮಾತನಾಡಿ, ಧೈರ್ಯ ತುಂಬಿದ್ದಾರೆ.

<><><>

ಜಮ್ಮು-ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ ಪ್ರೀತಿ ಪಾತ್ರರನ್ನು ಕಳೆದುಕೊಂಡ ಕುಟುಂಬಕ್ಕೆ ಮಾಜಿ ಪ್ರಧಾನಿ ದೇವೇಗೌಡ ಸಾಮಾಜಿಕ ಜಾಲತಾಣದಲ್ಲಿ ಸಂತಾಪ ಸೂಚಿಸಿದ್ದಾರೆ. ಪ್ರವಾಸಕ್ಕೆ ತೆರಳಿದ್ದ ಕನ್ನಡಿಗರನ್ನು ಸುರಕ್ಷಿತವಾಗಿ ರಾಜ್ಯಕ್ಕೆ ಕರೆತರಲು ಎಲ್ಲ ವ್ಯವಸ್ಥೆ ಮಾಡಲಾಗಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ. ನವದೆಹಲಿಯಲ್ಲಿ ಮಾತನಾಡಿದ ಅವರು ಈ ಸಂಬಂಧ ಜಮ್ಮು-ಕಾಶ್ಮೀರದ ಲೆಫ್ಟಿನೆಂಟ್ ಗವರ್ನರ್ ಸೇರಿದಂತೆ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಕನ್ನಡಿಗರನ್ನು ರಾಜ್ಯಕ್ಕೆ ಕರೆತಂದ ನಂತರ ಅವರವರ ಊರುಗಳಿಗೆ ತೆರಳಲು ವಿಶೇಷ ವ್ಯವಸ್ಥೆ ಮಾಡಲಾಗುವುದು ಎಂದು ಹೇಳಿದ್ದಾರೆ. ಕೇಂದ್ರ ನಾಗರಿಕ ವಿಮಾನಯಾನ ಸಚಿವರೊಂದಿಗೆ ಮಾತುಕತೆ ನಡೆಸಿ ವಿಶೇಷ ವಿಮಾನದ ವ್ಯವಸ್ಥೆ

ಮಾಡಲಾಗಿದೆ. ಮುಂಬೈ ಮತ್ತು ದೆಹಲಿಗೆ ಪ್ರವಾಸಿಗರನ್ನು ಕಳುಹಿಸಲು ಸರ್ಕಾರ ವ್ಯವಸ್ಥೆ ಮಾಡಿದೆ. ಇನ್ನೆರಡು ದಿನಗಳಲ್ಲಿ ಜಮ್ಮು-ಕಾಶ್ಮೀರದಲ್ಲಿರುವ ಎಲ್ಲ ಪ್ರವಾಸಿಗರನ್ನು ಅವರವರ ಸ್ಥಳಗಳಿಗೆ ಸುರಕ್ಷಿತವಾಗಿ ಮರಳಿಸುವ ಕೆಲಸ ಮಾಡಲಾಗುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><>

ಪಹಲ್ಗಾಮ್ ಭಯೋತ್ಪಾದಕ ದಾಳಿಯಿಂದಾಗಿ ಕಾಶ್ಮೀರದ ಆರ್ಥಿಕತೆ ಕುಸಿದಿದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದುರಂತದಲ್ಲಿ ಮೃತಪಟ್ಟ ಕುಟುಂಬಸ್ಥರಿಗೆ ಸಾಂತ್ವನ ಹೇಳಿದ್ದಾರೆ. ಈ ಕುರಿತಂತೆ ನಡೆಯುವ ಸರ್ವಪಕ್ಷ ಸಭೆಯಲ್ಲಿ ಸರ್ಕಾರಕ್ಕೆ ಸಲಹೆಗಳನ್ನು ನೀಡುವುದಾಗಿ ತಿಳಿಸಿದ್ದಾರೆ.

<><><>

ಜಮ್ಮು-ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ ಹತ್ಯೆಯಾದ ಶಿವಮೊಗ್ಗ ನಿವಾಸಿ ಮಂಜುನಾಥ್ ಕುಟುಂಬ ಸದಸ್ಯರೊಂದಿಗೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ದೂರವಾಣಿ ಮೂಲಕ ಮಾತನಾಡಿ ಸಾಂತ್ವನ ಹೇಳಿದರು. ಇದೇ ವೇಳೆ, ಬೆಂಗಳೂರಿನಲ್ಲಿ ವಿಂಗ್ ಕಮಾಂಡರ್ ಶಿಲಾದಿತ್ಯ ಬೋಸ್‌ನಿಂದ ಹಲ್ಲೆಗೊಳಗಾಗಿರುವ ಕನ್ನಡಿಗ ವಿಕಾಸ್ ಕುಮಾರ್‌ಗೆ ದೂರವಾಣಿ ಕರೆ ಮಾಡಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಧೈರ್ಯ ತುಂಬಿದ್ದಾರೆ.

<><><>

ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪಾಕಿಸ್ತಾನವೇ ಕಾರಣ ಎಂದು ಬಿಜೆಪಿ ಆರೋಪಿಸಿದೆ. ಬೆಂಗಳೂರಿನ ಬಿಜೆಪಿ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಪ್ರತಿಪಕ್ಷ ನಾಯಕ ಆರ್.ಅಶೋಕ, ಭಯೋತ್ಪಾದಕರ ದಾಳಿಯನ್ನು ಖಂಡಿಸಿದ್ದಾರೆ. ರಾಜ್ಯದಲ್ಲಿ ಸ್ಲೀಪರ್ ಸೆಲ್‌ಗಳು ಅಸ್ತಿತ್ವದಲ್ಲಿದ್ದು, ಸರ್ಕಾರ ಕ್ರಮವಹಿಸುವಂತೆ ಒತ್ತಾಯಿಸಿದ್ದಾರೆ. ಇದೇ ವೇಳೆ ಮಾತನಾಡಿದ ಮಾಜಿ ಉಪಮುಖ್ಯಮಂತ್ರಿ ಅಶ್ವತ್ಥನಾರಾಯಣ್ ಭಾರತೀಯರು ಒಗ್ಗಟ್ಟಿನಿಂದಿದ್ದು ಶಾಂತಿ, ಸಹಿಷ್ಣುತೆಯನ್ನು ಕಾಪಾಡಬೇಕು ಎಂದು ಮನವಿ ಮಾಡಿದ್ದಾರೆ. ಭಯೋತ್ಪಾದಕರ ದಾಳಿ ಖಂಡಿಸಿ ರಾಜ್ಯಾದ್ಯಂತ ಬಿಜೆಪಿ ಇಂದು ಸಂಜೆ ಮೇಣದ ಬತ್ತಿ ಉರಿಸಿ ಪ್ರತಿಭಟನೆ ನಡೆಸಲು ನಿರ್ಧರಿಸಿದೆ.

<><><>

ಚಾಮರಾಜನಗರದ ಮಲೆಮಹದೇಶ್ವರ ಬೆಟ್ಟದಲ್ಲಿ ನಾಳೆ ವಿಶೇಷ ಸಚಿವ ಸಂಪುಟ ಸಭೆ ನಡೆಯಲಿದೆ. ಸಭೆಯಲ್ಲಿ ಪ್ರಮುಖವಾಗಿ ಜಾತಿ ಗಣತಿ ವರದಿಯ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸಚಿವರಿಂದ ಮಾಹಿತಿ ಸಂಗ್ರಹಿಸಲಿದ್ದಾರೆ. ವರದಿಯ ಸಾಧಕ-ಬಾಧಕಗಳ ಕುರಿತಂತೆಯೂ ಚರ್ಚೆ ನಡೆಸಲಿದ್ದಾರೆ. ಇದೇ ವೇಳೆ, ಹೈನುಗಾರರಿಗೆ ಬಾಕಿ ಇರುವ ಪ್ರೋತ್ಸಾಹಧನ ಬಿಡುಗಡೆ ಮಾಡಲು ಸಚಿವ ಸಂಪುಟದಲ್ಲಿ ತೀರ್ಮಾನಿಸಬೇಕು. ಇದಲ್ಲದೆ ಸ್ಮಾರ್ಟ್ ಮೀಟರ್ ಹಾಗೂ ಜಮೀನುಗಳಿಗೆ ಟಿ.ಸಿ ಅಳವಡಿಕೆ ದರ ಕಡಿಮೆ ಮಾಡಬೇಕು ಎಂದು ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್. ಮಹೇಶ್ ಹಾಗೂ ಮಾಜಿ ಶಾಸಕ ಸಿ.ಎನ್ ನಿರಂಜನಕುಮಾರ್ ಒತ್ತಾಯಿಸಿದ್ದಾರೆ. ಸಂಪುಟ ಸಭೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ಮಹದೇಶ್ವರ ಬೆಟ್ಟದಲ್ಲಿ ಮೂರು ದಿನ ಭಕ್ತರ ವಾಸ್ತವ್ಯಕ್ಕೆ ನಿರ್ಬಂಧ ವಿಧಿಸಲಾಗಿದೆ.

<><><>

ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ರಾಜ್ಯ ಸಚಿವ ಡಾ.ಜಿತೇಂದ್ರ ಸಿಂಗ್ ನಾಳೆ ಬೆಂಗಳೂರಿಗೆ ಆಗಮಿಸಲಿದ್ದಾರೆ.

ಬೆಂಗಳೂರಿನಲ್ಲಿರುವ ಜಿಕೆವಿಕೆ ಕೃಷಿ ವಿಶ್ವವಿದ್ಯಾಲಯದಲ್ಲಿನ ಬ್ರಿಕ್ ಇನ್‌ಸ್ಟೆಮ್ ಸಂಶೋಧನಾ ಕೇಂದ್ರಕ್ಕೆ ಭೇಟಿ ನೀಡಲಿದ್ದಾರೆ. ೨೦೦೮ ರಲ್ಲಿ ಜೈವಿಕ ತಂತ್ರಜ್ಞಾನ ಇಲಾಖೆಯಿಂದ ಸ್ಥಾಪಿಸಲ್ಪಟ್ಟ

ಇನ್ಸ್ಟೆಮ್ ಅನ್ನು ೨೦೨೧ರಲ್ಲಿ ಜೈವಿಕ ತಂತ್ರಜ್ಞಾನ ಮತ್ತು ಸಂಶೋಧನೆ ಮತ್ತು ನಾವೀನ್ಯತೆ ಮಂಡಲಿ ಅಡಿಯಲ್ಲಿ ಸೇರಿಸಲಾಯಿತು.

<><><><>

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬೃಹತ್ ಸ್ವಚ್ಛತಾ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, ಎರಡು ದಿನಗಳಲ್ಲಿ ೪೫೮ ಸ್ಥಳಗಳಲ್ಲಿ ೩ ಸಾವಿರದ ೫೭೦ ಟನ್ ಕಟ್ಟಡ ತ್ಯಾಜ್ಯ ತೆರವುಗೊಳಿಸಲಾಗಿದೆ. ನಗರದಾದ್ಯಂತ ೧೦ ದಿನಗಳ ಕಾಲ ಹಮ್ಮಿಕೊಂಡಿರುವ ಸ್ವಚ್ಛತಾ ಅಭಿಯಾನವು ಎಲ್ಲಾ ವಲಯಗಳಲ್ಲಿ ಸಕ್ರಿಯವಾಗಿ ನಡೆಯುತ್ತಿದ್ದು, ವಲಯ ಆಯುಕ್ತರುಗಳು ಕೂಡಾ ಸ್ವಚ್ಛತಾ ಕಾರ್ಯ ನಡೆಯುತ್ತಿರುವ ಸ್ಥಳಗಳಿಗೆ ಖುದ್ದು ಭೇಟಿ ನೀಡಿ ಮೇಲ್ವಿಚಾರಣೆ ನಡೆಸುತ್ತಿದ್ದಾರೆ. ನಗರದ ೮ ವಲಯಗಳಲ್ಲಿ ೧ ಸಾವಿರದ ೫೩೩ ಸ್ಥಳಗಳಲ್ಲಿ ಕಟ್ಟಡ ಭಗ್ನಾವಶೇಷಗಳಿರುವ ಸ್ಥಳಗಳನ್ನು ಗುರುತಿಸಲಾಗಿದೆ. ಅವುಗಳ ಪೈಕಿ ಈಗಾಗಲೇ ೪೫೮ ಸ್ಥಳಗಳಲ್ಲಿ ಶೇಕಡ ೩೦ ರಷ್ಟು ಅಂದಾಜು ೩ ಸಾವಿರದ ೫೭೦ ಟನ್ ತ್ಯಾಜ್ಯವನ್ನು ತೆರವುಗೊಳಿಸಲಾಗಿದೆ. ಇದೇ ವೇಳೆ, ನಗರದಲ್ಲಿ ರಸ್ತೆ ಬದಿ, ಖಾಲಿ ಜಾಗಗಳಲ್ಲಿ ತ್ಯಾಜ್ಯವನ್ನು ಎಸೆಯದಂತೆ ಬಿಬಿಎಂಪಿ ಮನವಿ ಮಾಡಿದೆ.

<><><><>

ರಾಜ್ಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದ ಬಳಿಕ ಬಡವರು ಪರದಾಡುತ್ತಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ. ಯಾದಗಿರಿಯಲ್ಲಿ ನಡೆದ ಜನಾಕ್ರೋಶ ಯಾತ್ರೆಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ೫ ಗ್ಯಾರಂಟಿಗಳನ್ನು ಕೊಟ್ಟಿದ್ದು, ೬ನೇ ಗ್ಯಾರಂಟಿಗೆ ಹೆಚ್ಚು ಪ್ರಚಾರ ಕೊಟ್ಟಿಲ್ಲ, ಅದುವೇ ಬೆಲೆ ಏರಿಕೆಯ ಗ್ಯಾರಂಟಿ ಎಂದು ವ್ಯಂಗ್ಯವಾಡಿದ್ದಾರೆ.  ರಾಜ್ಯದಲ್ಲಿ ಅಭಿವೃದ್ಧಿ ಕೆಲಸ ಕಾರ್ಯ ಶೂನ್ಯವಾಗಿದ್ದು, ಸರ್ಕಾರ ಜಾತಿ- ಜಾತಿಗಳ ನಡುವೆ ಕಂದಕ ಸೃಷ್ಟಿಸುತ್ತಿವೆ ಎಂದು ದೂರಿದ್ದಾರೆ. ಇದೇ ವೇಳೆ, ಪಹಲ್ಗಾಮ್‌ನಲ್ಲಿ ಭಯೋತ್ಪಾದಕರು ನಡೆಸಿದ ದಾಳಿಯನ್ನು ಖಂಡಿಸಿದ್ದಾರೆ.

<><><><>

ರಾಜ್ಯ ಸರ್ಕಾರದ ಆದೇಶದಂತೆ ಉಡುಪಿ ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ಯಾವುದೇ ಶುಲ್ಕ ಪಾವತಿಸಿಕೊಳ್ಳದೇ ದರಖಾಸ್ತು ಪೋಡಿ ಆಂದೋಲನ ಹಮ್ಮಿಕೊಳ್ಳಲಾಗಿದೆ. ಉಡುಪಿ ತಹಶೀಲ್ದಾರ್ ಕಛೇರಿಯಿಂದ ಅನುಬಂಧ-೧ ರಂತೆ ದರ್ಖಾಸ್ತು ಮಂಜೂರಾದವರ ಮಾಹಿತಿ ಸ್ವೀಕೃತಿಯಾದಂತೆ, ಭೂಮಾಪಕರು ಅಳತೆ ಕೆಲಸಕ್ಕೆ ಆಗಮಿಸಲಿದ್ದಾರೆ. ಸಂಬಂಧಪಟ್ಟವರು ಭೂಮಾಪಕರು ಸ್ಥಳಕ್ಕೆ ಬಂದಾಗ ಕಡ್ಡಾಯವಾಗಿ ಹಾಜರಿದ್ದು, ಗಡಿಗಳಿಗೆ ಗಡಿ ಕಲ್ಲುಗಳನ್ನು ಹಾಕಿಸಲು ಸೂಕ್ತ ಕ್ರಮವಹಿಸಬೇಕು. ಹಾಜರಿಲ್ಲದೇ ಇದ್ದಲ್ಲಿ ದರಖಾಸ್ತು ಮಂಜೂರಾತಿಯನ್ನು ರದ್ದುಪಡಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಭೂದಾಖಲೆಗಳ ಉಪನಿರ್ದೇಶಕರ ಕಚೇರಿ ಪ್ರಕಟಣೆ ತಿಳಿಸಿದೆ.

<><><><>

ಇನ್ನು ಹವಾವರ್ತಮಾನ

ರಾಜ್ಯದ ಹಲವೆಡೆ ಮಳೆಯಾಗಿದೆ. ಬೆಳಗಾವಿಯ ಸೇಡಬಾಲ್ ೩, ಜೋಯಿಡಾ ೨, ಕಲಬುರಗಿಯ ಖಜೂರಿ, ಕ್ಯಾಸಲ್ ರ್‍ಯಾಕ್‌ನಲ್ಲಿ ೧ ಸೆಂಟಿ ಮೀಟರ್ ಮಳೆಯಾಗಿದೆ. ರಾಜ್ಯದಲ್ಲಿ ಅತಿ ಹೆಚ್ಚು ಉಷ್ಣಾಂಶ ೪೨.೬ ಡಿಗ್ರಿ ಸೆಲ್ಸಿಯಸ್ ಕಲಬುರಗಿಯಲ್ಲಿ ದಾಖಲಾಗಿದೆ. ಮುಂದಿನ ಮೂರು ದಿನಗಳ ಕಾಲ ಕರಾವಳಿ ಮತ್ತು ದಕ್ಷಿಣ ಒಳನಾಡಿನ ಒಂದೆರೆಡು ಕಡೆಗಳಲ್ಲಿ ಮಳೆಯಾಗುವ ಸಾಧ್ಯತೆ ಇದೆ. ಉತ್ತರ ಒಳನಾಡಿನಲ್ಲಿ ಒಣ ಹವೆ ಇರುವ ಸಂಭವವಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ

ನೀಡಿದೆ. ಬೆಂಗಳೂರು ಹಾಗೂ ಸುತ್ತಮುತ್ತ ಸಾಮಾನ್ಯ ಮೋಡಕವಿದ ವಾತಾವರಣ; ಗರಿಷ್ಠ ೩೫ ಮತ್ತು ಕನಿಷ್ಠ ೨೫ ಡಿಗ್ರಿ ಸೆಲ್ಸಿಯಸ್ ತಾಪಮಾನ ಸಂಭವ.

<><><><>

ಸಂಕ್ಷಿಪ್ತ ಸುದ್ದಿಗಳು

**1.** ರಿಶಿಷ್ಟ ಜಾತಿ ಒಳಮೀಸಲಾತಿ ವರ್ಗೀಕರಣ ಕುರಿತು ನ್ಯಾಯಮೂರ್ತಿ ಹೆಚ್.ಎನ್.ನಾಗಮೋಹನ್ ದಾಸ್ ಏಕಸದಸ್ಯ ವಿಚಾರಣಾ ಆಯೋಗದಿಂದ ದತ್ತಾಂಶ ಶೇಖರಿಸುವ ಸಮೀಕ್ಷೆಯು ಮಂಡ್ಯ ಜಿಲ್ಲೆಯಲ್ಲಿ ಮೇ ೫ ರಿಂದ ೧೭ ರವರೆಗೆ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದ್ದಾರೆ.

**2.** ಮೈಸೂರಿನ ಶಾರದಾದೇವಿ ನಗರದಲ್ಲಿ ನಿರ್ಮಾಣಗೊಂಡಿರುವ ಮೈಸೂರು ಮಹಾನಗರ ಪಾಲಿಕೆಯ ವಲಯ ಕಚೇರಿ -೩ ನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಇದೇ ೨೬ ರಂದು ಉದ್ಘಾಟನೆ ಮಾಡಲಿದ್ದಾರೆ.

**3.** ಕಾರವಾರದ ರವೀಂದ್ರ ನಾಥ್ ಟಾಗೂರ್ ಕಡಲತೀರದಲ್ಲಿ ಮೇ ೪ ರಿಂದ ೫ ದಿನಗಳ ಕಾಲ ಅದ್ದೂರಿಯಾಗಿ ಕರಾವಳಿ ಉತ್ಸವ ಆಯೋಜಿಸಲಾಗುವುದು ಎಂದು ಶಾಸಕ ಸತೀಶ್ ಸೈಲ್ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>